# ಯುವಜನತೆಗಿರಲಿ ಪಟೇಲ್ ಆದರ್ಶ

ಬೆಂಗಳೂರು: ಸರ್ದಾರ್ ವಲ್ಲಭಭಾಯ್ ಪಟೇಲ್ ರವರ ಆದರ್ಶ, ವ್ಯಕ್ತಿತ್ವ, ಗಟ್ಟಿ ನಿರ್ಧಾರ ಹಾಗೂ ಅವರ ಆಡಳಿತಾತ್ಮಕ ಗುಣಗಳನ್ನು ಯುವಜನತೆ ಪಾಲಿಸಬೇಕೆಂದು ವಿಧಾನ ಪರಿಷತ್ತಿನ ಸಭಾ ಬಸವರಾಜ ಹೊರಟ್ಟಿ ತಿಳಿಸಿದರು.



ಕರ್ನಾಟಕ ವಿಧಾನಸಭೆ ಸಚಿವಾಲಯದ ವತಿಯಿಂದ ಏರ್ಪಡಿಸಲಾದ ರಾಷ್ಟ್ರೀಯ ಏಕತಾ ದಿವಸ ಕಾರ್ಯಕ್ರಮದಲ್ಲಿ "ಸರ್ದಾರ್ ವಲ್ಲಭಭಾಯಿ ಪಟೇಲ್" ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಪ್ರತಿಜ್ಞಾ ವಿಧಿ ಸ್ವೀಕರಿಸಿ ಅವರು ಮಾತನಾಡಿದರು.

ಅಂದಿನ ಪರಿಸ್ಥಿತಿಯಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಪ್ರಧಾನಮಂತ್ರಿಗಳಾಗಿದ್ದರೆ ದೇಶದ ಪರಿಸ್ಥಿತಿ ಇನ್ನಷ್ಟು ಬದಲಾವಣೆಯಾಗುತ್ತಿತ್ತು. ಅತ್ಯಂತ ನಿಷ್ಠುರವಾದ, ಇಡೀ ಜಗತ್ತಿಗೆ ಮಾದರಿ ಆದಂತಹ ರಾಷ್ಟ್ರ ನಿರ್ಮಾಣದ ಹಂಬಲವಿತ್ತು. ಕೆಲವೊಬ್ಬರು ನಿಧನರಾದರೂ ನಮ್ಮೆದುರಿಗೆ ಜೀವಂತವಾಗಿರುತ್ತಾರೆ. ಅಂಥವರಲ್ಲಿ ಸರ್ದಾರ್ ವಲ್ಲಭಭಾಯ್ ಪಟೇಲ್ ಒಬ್ಬರು ಎಂದರು.

"ರಾಷ್ಟ್ರೀಯ ಏಕತಾ ದಿವಸ"ದ ಪ್ರತಿಜ್ಞಾ ವಿಧಿ ಬೋಧಿಸಿದ ನಂತರ ಮಾತನಾಡಿದ ವಿಧಾನಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು 570 ಕ್ಕಿಂತ ಹೆಚ್ಚು ಸಂಸ್ಥಾನಗಳನ್ನು ಒಗ್ಗೂಡಿಸಲು ಹಾಗೂ ಅನೇಕರು ಕ್ಲಿಷ್ಟಕರವಾದಂತಹ ಭಾಗಗಳನ್ನು ಭಾರತದ ಒಳಗೆ ವಿಲೀನಗೊಳಿಸಲು ಉಕ್ಕಿನ ಮನುಷ್ಯ ಪಟೇಲ್ ತೋರಿದ ಇಚ್ಛಾಶಕ್ತಿ ಅದ್ಭುತವಾದದ್ದು. ಅದಕ್ಕಾಗಿ ಆಡಳಿತಾತ್ಮಕ ಕ್ರಮಗಳನ್ನು ಕೈಗೊಂಡರು.ಈ ಕಾರಣದಿಂದಾಗಿಯೇ ಇಂದು ವಿಸ್ತಾರವಾದ ಭಾರತವನ್ನು ನೋಡಲು ಸಾಧ್ಯವಾಯಿತು ಎಂದು ತಿಳಿಸಿದರು.

ಪಟೇಲರ ದೂರದೃಷ್ಟಿ ಅವರ ತ್ಯಾಗ ಬಲಿದಾನ ದೇಶದ ಏಕತೆ ಸಮಗ್ರತೆ ಕಲ್ಪನೆ ಇಲ್ಲವಾದರೆ ಇಂತಹ ಭಾರತವನ್ನು ನೋಡಲು ಅಸಾಧ್ಯ. ನಾವೆಲ್ಲರೂ ಸದಾ ಸರ್ದಾರ್ ವಲ್ಲಭಭಾಯ್ ಪಟೇಲ್ ರವರನ್ನು ಸ್ಮರಿಸಿಕೊಳ್ಳಬೇಕು. ಹಾಗೆಯೇ ಅವರು ತೋರಿದ ದೇಶದ ಬದ್ಧತೆ, ತಮ್ಮನ್ನು ತಾವು ಆಡಳಿತದಲ್ಲಿ ತೊಡಗಿಸಿಕೊಂಡಿದ್ದ ರೀತಿ ನಮಗೆಲ್ಲರಿಗೂ ಪ್ರೇರಣೆಯಾಗಿದೆ ಎಂದು ಹೇಳಿದರು.

ಸಂಯುಕ್ತ ಕರ್ನಾಟಕ Mon, 01 N
epaper.sa